# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 318 |
| ಉತ್ತರಿಸುವ ದಿನಾಂಕ | 14.09.2022 |
| ಉತ್ತರಿಸುವ ಸಚಿವರು | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿನ ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ವಾಸಿಸುವ ನಿವೇಶನ ಮತ್ತು ವಸತಿ ರಹಿತರಿಗೆ ವಸತಿ-ಆಸರೆ ಒದಗಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಮ್ಮಿಕೊಂಡಿರುವ ವಸತಿ ಯೋಜನೆಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿನ ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿ ವಾಸಿಸುವ ನಿವೇಶನ ಮತ್ತು ವಸತಿ ರಹಿತರಿಗೆ ಈ ಕೆಳಗಿನ ಯೋಜನೆಗಳಡಿ ವಸತಿ ಸೌಲಭ್ಯವನ್ನು ಒದಗಿಸಲಾಗುವುದು.<br>• ವಾಜಪೇಯಿ ನಗರ ವಸತಿ ಯೋಜನೆ.<br>• ಡಾ. ಬಿ ಆರ್ ಅಂಬೇಡ್ಕರ್ ನಿವಾಸ್ ನಗರ ಯೋಜನೆ.<br>• ದೇವರಾಜ ಅರಸು ವಿಶೇಷ ವಸತಿ ಯೋಜನೆ.<br>• ಪ್ರಧಾನ ಮಂತ್ರಿ ಆವಾಸ್ ನಗರ ಯೋಜನೆ<br>• ಮುಖ್ಯಮಂತ್ರಿಗಳ "ಒಂದು ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ" |
| ಆ) | ರಾಜ್ಯದಲ್ಲಿ ಈ ನಗರ ವಸತಿ ಯೋಜನೆಗಳನ್ನು ಯಾವ ಇಲಾಖೆ ಮತ್ತು ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ ; (ಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿನ ವಸತಿ ಯೋಜನೆಗಳನ್ನು ರಾಜೀವ್ ಗಾಂಧಿ ವಸತಿ ನಿಗಮ, ನಗರ ಸ್ಥಳೀಯ ಸಂಸ್ಥೆಗಳು, ಹಾಗೂ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. |
| ಇ) | ರಾಜ್ಯಕ್ಕೆ ಈ ನಗರ ವಸತಿ ಯೋಜನೆಗಳ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದಿಂದ ಕಳೆದ 3 ವರ್ಷಗಳಿಂದ ಲಭ್ಯವಾಗಿರುವ ಅನುದಾನವೆಷ್ಟು ; (ಬಳಕೆಯಾದ ಅನುದಾನ, ಬಳಕೆ ಪ್ರಮಾಣ ಪತ್ರ ಒಳಗೊಂಡಂತೆ ಪೂರ್ಣ ಮಾಹಿತಿ ನೀಡುವುದು) | ಪ್ರಧಾನ ಮಂತ್ರಿ ಆವಾಸ್ (ನಗರ) ಯೋಜನೆಯಡಿ ಕೇಂದ್ರ ಸರ್ಕಾರದಿಂದ ಕಳೆದ 3 ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನದ ವಿವರ ಈ ಕೆಳಗಿನಂತಿದೆ.<br>(ರೂ. ಕೋಟಿಗಳಲ್ಲಿ)<br>ವರ್ಷ / ಕೇಂದ್ರದ ಅನುದಾನ / ಬಳಕೆ ಪ್ರಮಾಣ ಪತ್ರ<br>2018-19 / 282.69 / 268.08<br>2019-20 / 221.78 / 221.78<br>2020-21 / 360.20 / 360.20<br>2021-22 / 251.25 / 251.25<br>**ಒಟ್ಟು / 1115.93 / 1101.32** |
| ಈ) | ರಾಜ್ಯದಲ್ಲಿ ಪ್ರಧಾನ ಮಂತ್ರಿಯುವರ Affordable Urban Housing ಒಳಗೊಂಡಂತೆ, ಇತರ ಕೇಂದ್ರ ಪುರಸ್ಕೃತ ನಗರ ವಸತಿ ಯೋಜನೆಗಳ ಅನುಷ್ಠಾನದಲ್ಲಿ ರಾಜ್ಯ ಸರ್ಕಾರ ಹಿಂದೆ ಉಳಿದಿರುವುದೇ ; ಇಲ್ಲದಿದ್ದಲ್ಲಿ, ಈ ವಸತಿ ಯೋಜನೆಗಳ ಯಶಸ್ವಿ | ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ನಗರ ಪ್ರದೇಶಗಳಿಗೆ ಸಂಬಂಧಿಸಿದಂತೆ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆಯನ್ನು ರಾಜ್ಯದಲ್ಲಿ ರಾಜ್ಯದ ವಸತಿ ಯೋಜನೆಗಳೊಂದಿಗೆ ಸಮನ್ವಯಗೊಳಿಸಿ ಅನುಷ್ಠಾನಗೊಳಿಸಲಾಗುತ್ತಿದೆ.<br>ಅದರಂತೆ, ದಿನಾಂಕ: 31.03.2022ರ ಅಂತ್ಯಕ್ಕೆ ಪ್ರಧಾನ ಮಂತ್ರಿ ಆವಾಸ್ ನಗರ ಯೋಜನೆಯಡಿ ರಾಜ್ಯದಲ್ಲಿ ರೂ. 29,848.88 ಕೋಟಿಗಳ ಮೊತ್ತದಲ್ಲಿ ಸುಮಾರು 5.75 ಲಕ್ಷ ಮನೆಗಳನ್ನು ನಿರ್ಮಿಸುವ 2737 ಯೋಜನೆಗಳು ಕೇಂದ್ರ ಸರ್ಕಾರದಿಂದ |

ಅನುಷ್ಠಾನದ ಬಗ್ಗೆ ಪೂರ್ಣ ವಿವರ ನೀಡುವುದು ?.

ಅನುಮೋದನೆಗೊಂಡಿರುತ್ತವೆ.

| (Rs.in Crores) | | | |
|---|---|---|---|
| **Vertical** | **No of projects** | **No of DUs** | **Project Cost** |
| BLC Total | 2337 | 228188 | 8690.36 |
| AHP Total | 400 | 347453 | 21158.52 |
| **Total** | **2737** | **575641** | **29848.88** |

ಕೇಂದ್ರ ಸರ್ಕಾರವು ಪ್ರತಿ ಮನೆ / ಫಲಾನುಭವಿಗೆ ನೀಡುವ ರೂ.1.50 ಲಕ್ಷ ಅನುದಾನದ ಜೊತೆಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ರೂ.2.00 ಲಕ್ಷ ಮತ್ತು ಇತರೆ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ರೂ.1.20 ಲಕ್ಷ ಅನುದಾನವನ್ನು ಒದಗಿಸಲಾಗುತ್ತಿದೆ.

ಮುಂದುವರೆದು, ಈವರೆಗೆ ಪ್ರಧಾನ ಮಂತ್ರಿ ಆವಾಸ್ ನಗರ ಯೋಜನೆಯಡಿ ಕೇಂದ್ರ ಸರ್ಕಾರದಿಂದ ರೂ. 2793.14 ಕೋಟಿಗಳನ್ನು ಬಿಡುಗಡೆ ಮಾಡಿದ್ದು, ಇದಕ್ಕೆ ಅನುಗುಣವಾಗಿ ರಾಜ್ಯ ಸರ್ಕಾರದಿಂದ ರೂ. 2778.59 ಕೋಟಿಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

ಈವರೆಗೆ ಸದರಿ ಯೋಜನೆಯಡಿ ಒಟ್ಟು 1,24,121 ಮನೆಗಳ ಕಾಮಗಾರಿ ಪೂರ್ಣಗೊಂಡಿದ್ದು, 77,588 ಮನೆಗಳ ಕಾಮಗಾರಿಯು ಪ್ರಗತಿಯಲ್ಲಿರುತ್ತವೆ.

ಈ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ ರಾಜ್ಯದಲ್ಲಿ ಪ್ರಧಾನ ಮಂತ್ರಿ ಆವಾಸ್ ನಗರ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಹಿಂದೆ ಉಳಿದಿರುವುದಿಲ್ಲ, ಬದಲಾಗಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ.

ಸಂಖ್ಯೆ: ವಇ 186 ಹೆಚ್‌ಎಫ್‌ಎ 2022]

**(ವಿ. ಸೋಮಣ್ಣ)**
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು